ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1628/2018

ಚಾಸಾ:3 ಪ್ರಾಸಾ:4

ದಿನಾಂಕ: 04.12.2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಪ್ರವೀಣ ಡಿಸೋಜಾ |
| ತಂದೆಯ ಹೆಸರು | : | ಲ್ಯಾಡ್ರೋ ಡಿ ಸೋಜಾ |
| ವಯಸ್ಸು | : | 42 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ಕಳಂಜೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ನಿಪಿ-1ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಸಾಕ್ಷಿ ನಿಪಿ-9 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ನಿಪಿ-10 ಮತ್ತು 11ನ್ನು ನೋಡಿ ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ:27-10-2017 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ, ಚಾಸಾ-4 ಮತ್ತು 8 ರವರ ಸಮಕ್ಷಮ ಬೆಳಿಗ್ಗೆ 5 ರಿಂದ

6ಗಂಟೆಯವರೆಗೆ ಪಂಚನಾಮೆ ಜರುಗಿಸಿ ಸ್ಥಳದಲ್ಲಿ ಕೆಎ-20-ಸಿ-3817 407 ಗೂಡ್ಸ್ ಟೆಂಪೋ ಹಾಗೂ 1.1/2 ಯುನಿಟ್ ಮರಳನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**